ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 23/10/20

# ಪುರಸಭೆ, ಪ.ಪಂ ಚುನಾವಣೆಗೆ ಹೈಕೋರ್ಟ್‌ನಿಂದ ಹಸಿರು ನಿಶಾನೆ

ಬೆಂಗಳೂರು: ರಾಜ್ಯದ 117 ಪುರಸಭೆ ಹಾಗೂ 100 ಪಟ್ಟಣ ಪಂಚಾಯಿತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಡೆಸಲು ಹೈಕೋರ್ಟ್ ಗುರುವಾರ ಒಪ್ಪಿಗೆ ನೀಡಿದೆ. ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳ ಮೀಸಲಾತಿ ನಿಗದಿಪಡಿಸಿ ರಾಜ್ಯ ಸರ್ಕಾರ ಅ.8ರಂದು ಹೊರಡಿಸಿದ್ದ ಅಧಿಸೂಚನೆಗೆ ಅ.19ರಂದು ನೀಡಿದ್ದ ತಡೆಯಾಜ್ಞೆ ಆದೇಶವನ್ನು ಹಿಂಪಡೆದಿರುವ ಹೈಕೋರ್ಟ್, ನ.10ರೊಳಗೆ ಚುನಾವಣಾ ಪ್ರಕ್ರಿಯೆ ಪೂರ್ಣಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ಆದೇಶಿಸಿದೆ. ಪಟ್ಟಣ ಪಂಚಾಯಿತಿಗಳ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ಮೀಸಲಾತಿ ನಿಗದಿಪಡಿಸಿ ರಾಜ್ಯ ಸರ್ಕಾರ ಹೊರಡಿಸಿದ್ದ ಅಧಿಸೂಚನೆ ಪ್ರಶ್ನಿಸಿ ಹಲವು ಆಕಾಂಕ್ಷಿಗಳು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.